ಕನ್ನಡಪ್ರಭ

**Saturday 29th July 2023, Page No.08**

## VTU honorary doctorate: A.V.S Murthy, Hon. Secretary, RSST

# ಆ.1ಕ್ಕೆ ಚುಂಚಶ್ರೀ ಸೇರಿ ಮೂವರಿಗೆ ವಿಟಿಯು ಗೌರವ ಡಾಕ್ಟರೇಟ್



**ಬೆಳಗಾವಿ:** ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯದ (ವಿಟಿಯು) 23ನೇ ವಾರ್ಷಿಕ ಘಟಿಕೋತ್ಸವ ಆಗಸ್ಟ್ 1ರಂದು ವಿಟಿಯು ಡಾ.ಎಪಿಜೆ ಅಬ್ದುಲ್ ಕಲಾಂ ಸಭಾಭವನದಲ್ಲಿ ನಡೆಯಲಿದ್ದು, ಆದಿ ಚುಂಚನಗಿರಿ ಮಹಾಸಂಸ್ಥಾನಮಠದಡಾ.ನಿರ್ಮಲಾನಂದಸ್ವಾಮೀಜಿ ಸೇರಿದಂತೆ ಮೂವರಿಗೆ ಗೌರವ ಡಾಕ್ಟರೇಟ್ ಪದವಿ ನೀಡಿ ಗೌರವಿಸಲಿದೆ ಎಂದು ವಿಟಿಯು ಕುಲಪತಿ ಪ್ರೊ. ವಿದ್ಯಾಶಂಕರ ಎಸ್. ಹೇಳಿದರು. ನಗರದಲ್ಲಿ ಶುಕ್ರವಾರ ಸುದ್ದಿಗೋಷ್ಠಿಯಲ್ಲಿ ಈ ಕುರಿತು ಮಾಹಿತಿ ನೀಡಿದ ಅವರು, ಡಾ.ನಿರ್ಮಲಾನಂದ ಸ್ವಾಮೀಜಿ, ರಾಷ್ಟ್ರೀಯ ಶಿಕ್ಷಣ ಸಮಿತಿ ಟ್ರಸ್ಟ್‌ನ ಗೌರವ ಕಾರ್ಯದರ್ಶಿ ಡಾ.ಎ.ವಿ.ಎಸ್ ಮೂರ್ತಿ ಹಾಗೂ ಮೈಸೂರು ಮೆಕ್ಯಾನ ಟೈಲ್ ಕಂಪನಿ ಲಿ.ನ ಅಧ್ಯಕ್ಷ ಎಚ್.ಎನ್.ಶೆಟ್ಟಿ ಅವರಿಗೆ ಗೌರವ ಡಾಕ್ಟರೇಟ್ ಪದವಿ ನೀಡಿ ಗೌರವಿಸಲಾಗುವುದು ಎಂದು ಹೇಳಿದರು.

ಕನ್ನಡಪ್ರಭ Sat, 29 July 2023
https://kpepaper.asianetnews.co